ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	1381
ವಿಧಾನ ಪರಿಷತ್ತು ಸದಸ್ಯರ ಹೆಸರು	:	ಶ್ರೀ ಎಂ. ನಾರಾಯಣಸ್ವಾಮಿ
ಉತ್ತರಿಸಬೇಕಾದ ದಿನಾಂಕ	:	16.03.2021
ಉತ್ತರಿಸುವ ಸಚಿವರು	:	ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಹಾಗೂ ಕಾನೂನು ಮಾಪನಶಾಸ್ತ್ರ ಇಲಾಖಾ ಸಚಿವರು.

ಕ್ರ. ಸಂ	ಪ್ರಶ್ನೆ	ಉತ್ತರ
ಅ	2020-21ನೇ ಸಾಲಿನಲ್ಲಿ ಬೆಂಗಳೂರು ನಗರ ಜಿಲ್ಲೆಯಿಂದ ಹೊಸ ಪಡಿತರ ಚೀಟಿಗಾಗಿ ಸ್ವೀಕೃತವಾಗಿರುವ ಅರ್ಜಿಗಳೆಷ್ಟು ಹಾಗೂ ಬಿ.ಪಿ.ಎಲ್ ಮತ್ತು ಎ.ಪಿ.ಎಲ್ ಪಡಿತರ ಚೀಟಿಗಳೆಷ್ಟು; (ವಿವರವನ್ನು ನೀಡುವುದು)	2020-21ನೇ ಸಾಲಿನಲ್ಲಿ ಬೆಂಗಳೂರು ನಗರ ಜಿಲ್ಲೆಯಲ್ಲಿ 6113 ಆದ್ಯತಾ ಪಡಿತರ ಚೀಟಿಗಳಿಗೆ ಹಾಗೂ 1209 ಆದ್ಯತೇತರ ಪಡಿತರ ಚೀಟಿಗಳನ್ನು ಕೋರಿ ಅರ್ಜಿಗಳು ಸ್ವೀಕೃತವಾಗಿರುತ್ತವೆ. ಬೆಂಗಳೂರು ನಗರ ಜಿಲ್ಲೆಯಲ್ಲಿ ಈ ಕೆಳಕಂಡಂತೆ ಆದ್ಯತಾ/ಆದ್ಯತೇತರ ಪಡಿತರ ಚೀಟಿಗಳು ಚಾಲ್ತಿಯಲ್ಲಿರುತ್ತವೆ. <table><tr><td>ಅಂತ್ಯೋದಯ ಅನ್ನ ಪಡಿತರ ಚೀಟಿಗಳು</td><td>ಆದ್ಯತಾ ಪಡಿತರ ಚೀಟಿಗಳು</td><td>ಆದ್ಯತೇತರ ಪಡಿತರ ಚೀಟಿಗಳು</td><td>ಒಟ್ಟು</td></tr><tr><td>13053</td><td>500279</td><td>78663</td><td>591995</td></tr></table>
ಆ	2020-21ನೇ ಸಾಲಿನಲ್ಲಿ ಬೆಂಗಳೂರು ನಗರ ಜಿಲ್ಲೆಯ ವ್ಯಾಪ್ತಿಯಲ್ಲಿ ವಿತರಿಸಲಾಗಿರುವ ಪಡಿತರ ಚೀಟಿಗಳೆಷ್ಟು; ಹಾಗೂ ಉಳಿದ ಪಡಿತರ ಚೀಟಿಗಳ ಅರ್ಜಿಗಳನ್ನು ಎಷ್ಟು ಕಾಲಮಿತಿಯೊಳಗೆ ವಿತರಿಸಲಾಗುವುದು; (ಬಿಪಿಎಲ್ ಮತ್ತು ಎಪಿಎಲ್ ಪಡಿತರ ಚೀಟಿಗಳ ವಿವರವನ್ನು ನೀಡುವುದು)	2020-21ನೇ ಸಾಲಿನಲ್ಲಿ ಬೆಂಗಳೂರು ನಗರ ಜಿಲ್ಲೆಯಲ್ಲಿ ಒಟ್ಟು 53 ಆದ್ಯತೇತರ ಪಡಿತರ ಚೀಟಿಗಳನ್ನು ವಿತರಣೆ ಮಾಡಲಾಗಿರುತ್ತದೆ. ಪ್ರಸ್ತುತ ಆದ್ಯತಾ (ಬಿಪಿಎಲ್) ಪಡಿತರ ಚೀಟಿಗಳ ವಿತರಣೆಯನ್ನು ತಾತ್ಕಾಲಿಕವಾಗಿ ತಡೆಹಿಡಿಯಲಾಗಿರುತ್ತದೆ. ಆದ್ಯತೇತರ (ಎಪಿಎಲ್) ಪಡಿತರ ಚೀಟಿಗಳ ವಿತರಣೆ ಚಾಲ್ತಿಯಲ್ಲಿರುತ್ತದೆ.
ಇ	ಬಿ.ಪಿ.ಎಲ್ ಕಾರ್ಡ್ ಪಡೆಯಲು ಸರ್ಕಾರ ವಿಧಿಸುತ್ತಿರುವ ಅರ್ಹತೆಗಳು ಹಾಗೂ ಮಾನದಂಡಗಳೇನು	ಸರ್ಕಾರವು 16-08-2016, 25-03-2017 ಹಾಗೂ 20-5-2017 ರ ಆದೇಶದಲ್ಲಿ ಬಿಪಿಎಲ್ ವರ್ಗಕ್ಕೆ ಒಳಪಡದ (Exclusion Criteria) 04 ಮಾನದಂಡಗಳನ್ನು ಗುರುತಿಸಿ ಆದೇಶಿಸಿರುತ್ತದೆ. ಕೆಳಗಿನ ಈ 04 ಮಾನದಂಡಗಳಿಗೆ

		ಒಳಪಡದವರು ಬಿಪಿಎಲ್ ಪಡಿತರ ಚೀಟಿ ಪಡೆಯಲು ಅರ್ಹರಿರುತ್ತಾರೆ. 1)ವೇತನವನ್ನು ಗಣನೆಗೆ ತೆಗೆದುಕೊಳ್ಳದೆ ಎಲ್ಲಾ ಖಾಯಂ ನೌಕರರು ಅಂದರೆ, ಸರ್ಕಾರದ ಅಥವಾ ಸರ್ಕಾರದಿಂದ ಅನುದಾನವನ್ನು ಪಡೆಯುತ್ತಿರುವ ಸಂಸ್ಥೆಗಳು ಅಥವಾ ಸರ್ಕಾರಿ ಪ್ರಾಯೋಜಿತ, ಸರ್ಕಾರಿ ಸ್ವಾಮ್ಯದಸಂಸ್ಥೆಗಳು/ಮಂಡಳಿಗಳು /ನಿಗಮಗಳು/ಸ್ವಾಯತ್ತ ಸಂಸ್ಥೆಗಳೂ ಇತ್ಯಾದಿ: ಒಳಗೊಂಡಂತೆ ಆದಾಯ ತೆರಿಗೆ/ಸೇವಾ ತೆರಿಗೆ/ವ್ಯಾಟ್/ವೃತ್ತಿ ತೆರಿಗೆ ಪಾವತಿಸುವ ಎಲ್ಲಾ ಕುಟುಂಬಗಳು. 2. ಗ್ರಾಮೀಣ ಪ್ರದೇಶದಲ್ಲಿ 3 ಹೆಕ್ಟೇರ್ ಒಣಭೂಮಿ ಅಥವಾ ತತ್ಸಮಾನ ನೀರಾವರಿ ಭೂಮಿ ಹೊಂದಿರುವ ಕುಟುಂಬಗಳು ಅಥವಾ ಗ್ರಾಮೀಣ ಪ್ರದೇಶವನ್ನು ಹೊರತುಪಡಿಸಿ ನಗರ ಪ್ರದೇಶಗಳಲ್ಲಿ 1000 ಚದರ ಅಡಿಗಿಂತಲೂ ಹೆಚ್ಚಿನ ವಿಸ್ತೀರ್ಣದ ಪಕ್ಕಾ ಮನೆಯನ್ನು ಸ್ವಂತವಾಗಿ ಹೊಂದಿರುವ ಕುಟುಂಬಗಳು. 3. ಜೀವನೋಪಾಯಕ್ಕಾಗಿ ಸ್ವತಃ ಓಡಿಸುವ ಒಂದು ವಾಣಿಜ್ಯ ವಾಹನವನ್ನು ಅಂದರೆ ಟ್ರಾಕ್ಟರ್, ಮ್ಯಾಕ್ಸಿಕ್ಯಾಬ್ ಟ್ಯಾಕ್ಸಿ ಇತ್ಯಾದಿಗಳನ್ನು ಹೊಂದಿದ ಕುಟುಂಬವನ್ನು ಹೊರತುಪಡಿಸಿ, ನಾಲ್ಕು ಚಕ್ರದ ವಾಹನಗಳನ್ನು ಹೊಂದಿರುವ ಎಲ್ಲಾ ಕುಟುಂಬಗಳು. 4. ಕುಟುಂಬದ ವಾರ್ಷಿಕ ಆದಾಯವು ರೂ.1.20 ಲಕ್ಷಗಳಿಗಿಂತ ಹೆಚ್ಚು ಇರುವ ಕುಟುಂಬಗಳು.

ಆನಾಸ 103 ಡಿಆರ್ಎ 2021(ಇ-ಆಫೀಸ್)

(ಉಮೇಶ ವಿ. ಕತ್ತಿ)
ಆಹಾರ, ನಾಗರಿಕ ಸರಬರಾಜು ಮತ್ತು
ಗ್ರಾಹಕರ ವ್ಯವಹಾರಗಳ ಹಾಗೂ
ಕಾನೂನು ಮಾಪನಶಾಸ್ತ್ರ ಇಲಾಖಾ ಸಚಿವರು.